ಪ್ರಧಾನ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ಕಾರಿಯವರ ನ್ಯಾಯಾಲಯ, ಕೊಡಗು, ಮಡಿಕೇರಿ

ಸಿ.ಸಿ.ನಂಃ **1096/2020**

ಪಿಡಬ್ಲ್ಯುಃ - **6**
ಸಿಡಬ್ಲ್ಯುಃ - **7**

ದಿನಾಂಕಃ **04.10.2023** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿದಾರರ ಹೆಸರು | - ಅನೀಶ್ ಕುಮಾರ್ |
| ತಂದೆಯ ಹೆಸರು | - ನಾರಾಯಣ |
| ವಯಸ್ಸು | - 32 ವರ್ಷ |
| ವೃತ್ತಿ | - ವ್ಯವಸಾಯ |
| ವಾಸಸ್ಥಳ | - ಹಾಕತ್ತೂರು ಗ್ರಾಮ |

ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ಯವರಿಂದಃ-

ಚಾಸಾ-1 ರಿಂದ 3 ಮತ್ತು 6 ಗೊತ್ತು. ಅವರು ನಮ್ಮ ಊರಿನವರು. ಆರೋಪಿತರು ಗೊತ್ತು, ಅವರು ನಮ್ಮ ಊರಿನವರೇ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಗೊತ್ತಿಲ್ಲ. ಈ ಪ್ರಕರಣದಲ್ಲಿ ನಾನು ಯಾವುದೇ ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಮಾನ್ಯ ಸರಕಾರಿ ಅಭಿಯೋಜಕರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ನೀಡಲಾಯಿತು)

ಪಾಟೀ ಸವಾಲು ಮಾನ್ಯ ಸರಕಾರಿ ಅಭಿಯೋಜಕರಿಂದಃ-

ದಿಃ 06.08.2020 ರ ಬೆಳಿಗ್ಗೆ 7.30 ರ ಸಮಯದಲ್ಲಿ ನಾನು ನಮ್ಮ ಊರಿನ ಲಿಂಗಪ್ಪರವರ ಮನೆಯ ಮುಂದೆ ನಡೆದು ಹೋಗುವಾಗ ಕಾಫಿ ತೋಟದಲ್ಲಿ ಜಗಳದ ಸದ್ದು ಕೇಳಿಸಿತು ಎಂದರೆ ಸರಿಯಲ್ಲ. ಆರೋಪಿತರೆಲ್ಲಾ ಚಾಸಾ-1 ರವರ ಜೊತೆ ಜಗಳ ಆಡುತ್ತಿದ್ದರು ಎಂದರೆ ಸರಿಯಲ್ಲ. ಆ ಸಮಯದಲ್ಲಿ ಚಾಸಾ-2 ರವರು ಅಲ್ಲೇ ಇದ್ದು ನಾನು ಘಟನೆಯ ಬಗ್ಗೆ ಆಕೆಯನ್ನು ವಿಚಾರಿಸಿದ್ದೇನೆ ಎಂದರೆ ಸರಿಯಲ್ಲ. ಆಗ ಪ್ರೇಮಾರವರು ಆರೋಪಿತರು ಚರಂಡಿ ಮುಚ್ಚಿ ದ ಬಗ್ಗೆ ಹಾಗೂ ಅದನ್ನು ಕೇಳಿದ್ದಕ್ಕೆ ಚಾಸಾ-1 ರವರನ್ನು ಬೈದು ಹಲ್ಲೆ ಮಾಡಿದ ಬಗ್ಗೆ ನನಗೆ ತಿಳಿಸಿದರು ಎಂದರೆ ಸರಿಯಲ್ಲ. ಆರೋಪಿತರು ಗುದ್ದಲಿಯಿಂದ ಚಾಸಾ-1

ರವರ ಎಡ ಕಾಲಿಗೆ ಹೊಡೆದು ಗಾಯಪಡಿಸಿದರು ಎಂದು ಹಾಗೂ ಕೊಲೆ ಬೆದರಿಕೆ ಹಾಕಿದರು ಎಂದು ನನಗೆ ತಿಳಿಸಿದರು ಎಂದರೆ ಸರಿಯಲ್ಲ. ಈ ವಿಚಾರವಾಗಿ ದಿಃ 08.08.2020 ರಂದು ಪೊಲೀಸರಿಗೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲ ಗಳೆದ ಹೇಳಿಕೆಯನ್ನು ನಿಪಿ-4 ಎಂದು ಗುರುತಿಸಲಾಯಿತು.

ನಿಪಿ-4 ರ ವಿಚಾರ ತಿಳಿದಿದ್ದರೂ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ - ಇಲ್ಲ.

ಮರು ವಿಚಾರಣೆಃ - ಇಲ್ಲ

ಮುಕ್ತ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓ. ಹೇ. ಕೇ. ಸರಿ ಇದೆ.

ಸಹಿ/-

ಪ್ರಧಾನ ಜೆಎಂಎಫ್‌ಸಿ, ಮಡಿಕೇರಿ